| | | | | |
|---|---|---|---|---|
| (7) | ವಾಹನ ಚಾಲಕರು | 01 | 00 | 01 |
| (8) | ಡಿ–ದರ್ಜೆ ನೌಕರರು | 35 | 27 | 08 |
| | ಒಟ್ಟು | 75 | 46 | 29 |

4 ಸಹಾಯಕ ನಿರ್ದೇಶಕರುಗಳ ಹುದ್ದೆಗಳನ್ನು ಭರ್ತಿ ಮಾಡಲು ಕರ್ನಾಟಕ ಲೋಕಸೇವಾ ಆಯೋಗದಿಂದ ಪ್ರಕಟಣೆ ಹೊರಡಿಸಲಾಗಿದೆ ಅಲ್ಲದೆ ನೇರ ನೇಮಕಾತಿ ಕೋಟಾದ ಲಡಿಯಲ್ಲೂ 90 ಸಹಾಯಕ ನಿರ್ದೇಶಕರ ಹುದ್ದೆಗಳನ್ನು ಭರ್ತಿ ಮಾಡಲು ಪ್ರಸ್ತಾವನೆಯನ್ನು ಆರ್ಥಿಕ ಇಲಾಖೆಯೊಂದಿಗೆ ಸಮಾಲೋಚಿಸಲಾಗುತ್ತಿದೆ ನೇರ ನೇಮಕಾತಿಯ ಮುಖಾಂತರ ಖಾಲಿ ಹುದ್ದೆಗಳನ್ನು ತುಂಬಲು ವೇಳೆ ತಗಲುವುದರಿಂದ ಸದ್ಯಕ್ಕೆ ಖಾಲಿ ಇರುವ ಸಹಾಯಕ ನಿರ್ದೇಶಕ ಹುದ್ದೆಗಳನ್ನು ಪಶುವೈದ್ಯಾಧಿಕಾರಿಗಳಿಗೆ ಮುಂಬಡ್ತಿ ಮುಖೇನ ತಾತ್ಕಾಲಿಕವಾಗಿ ಸ್ವಯಂವೇತನ ಶ್ರೇಣಿ ಮೇರೆ (ಓಪಿಜಿ) ಭರ್ತಿ ಮಾಡಲು ಕ್ರಮ ವಹಿಸಲಾಗುತ್ತಿದೆ ಮತ್ತು ಪಶುವೈದ್ಯಾಧಿಕಾರಿಗಳ ಖಾಲಿ ಹುದ್ದೆಗಳನ್ನು ಭರ್ತಿ ಮಾಡಲು ವಿಶೇಷ ನೇರ ನೇಮಕಾತಿ ನಿಯಮದಡಿ ರಾಜ್ಯಾದ್ಯಂತ 276 ಪಶುವೈದ್ಯಾಧಿಕಾರಿಗಳನ್ನು ತುಂಬಲು ಪ್ರಕಟಣೆ ಹೊರಡಿಸಿ ಅರ್ಜಿ ಆಹ್ವಾನಿಸಲಾಗಿದ್ದು, ಬಂದಿರುವ ಅರ್ಜಿಗಳು ಪರಿಶೀಲನೆಯಲ್ಲಿವೆ ಮುಂಬಡ್ತಿ ಪ್ರಕ್ರಿಯೆ ಮತ್ತು ನೇಮಕಾತಿ ಪ್ರಕ್ರಿಯೆ ಮುಗಿದ ಕೂಡಲೇ ಕೂಡ್ಲಿಗಿ ತಾಲ್ಲೂಕಿನಲ್ಲಿ ಖಾಲಿ ಇರುವ ಸಹಾಯಕ ನಿರ್ದೇಶಕರುಗಳು ಮತ್ತು ಪಶುವೈದ್ಯಾಧಿಕಾರಿಗಳ ಹುದ್ದೆಗೆ ನೇಮಕ ಮಾಡಲು ಸಹ ಕ್ರಮ ವಹಿಸಲಾಗುವುದು

**625 (626) ಶ್ರೀ ಧ್ರುವನಾರಾಯಣ, ಆರ್ (ಸಂತೇಮರಳ್ಳಿ) ಮಾನ್ಯ ಸಮಾಜ ಕಲ್ಯಾಣ ಸಚಿವರು ದಯವಿಟ್ಟು ಈ ಕೆಳಕಂಡ ಪ್ರಶ್ನೆಗಳಿಗೆ ಉತ್ತರಿಸುವರೆ –**

ಅ) ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡದ ಇಂಜಿನಿಯರಿಂಗ್ ಮತ್ತು ವೈದ್ಯಕೀಯ ಕಾಲೇಜಿನಲ್ಲಿ ವಿದ್ಯಾಭ್ಯಾಸ ಮಾಡುವ ವಿದ್ಯಾರ್ಥಿಗಳಿಗೆ ಪ್ರವೇಶ ಶುಲ್ಕವನ್ನು (ವಿದ್ಯಾರ್ಥಿ ವೇತನ) ಭರಿಸಲು ಸರ್ಕಾರ ಕೈಗೊಂಡ ನಿರ್ಣಯವನ್ನು ಅನುಷ್ಠಾನಗೊಳಿಸಲಾಗಿದೆಯೇ ,

ಆ) ಅನುಷ್ಠಾನಗೊಳಿಸದಿದ್ದಲ್ಲಿ ಕಾರಣವೇನು ,

ಇ) ಇದಕ್ಕಾಗಿ ಕೇಂದ್ರ ಸರ್ಕಾರದಿಂದ ಅನುದಾನ ದೊರೆತಿದೆಯೆ ?

**ಶ್ರೀ ಬಾಲಚಂದ್ರ ಲ ಜಾರಕಿಹೊಳಿ (ಸಮಾಜ ಕಲ್ಯಾಣ ಸಚಿವರು) –**

ಅ) ಹೌದು ,

ವೈದ್ಯಕೀಯ ಮತ್ತು ಇಂಜಿನಿಯರಿಂಗ್ ಕಾಲೇಜುಗಳಲ್ಲಿ ವಿದ್ಯಾಭ್ಯಾಸ ಮಾಡುವ ಪರಿಶಿಷ್ಟ ಜಾತಿ/ಪರಿಶಿಷ್ಟ ವರ್ಗದ ವಿದ್ಯಾರ್ಥಿಗಳ ಕುಟುಂಬದ ವಾರ್ಷಿಕ ಆದಾಯ ರೂ 1 00 ಲಕ್ಷದ ಮಿತಿಯೊಳಗಿದ್ದಲ್ಲಿ ಅಂತಹ ವಿದ್ಯಾರ್ಥಿಗಳಿಗೆ ಸಮಾಜ ಕಲ್ಯಾಣ ಇಲಾಖೆಯು ಕೇಂದ್ರ ಪುರಸ್ಕೃತ ಯೋಜನೆಯಡಿ ಭಾರತ ಸರ್ಕಾರದ ಮೆಟ್ರಿಕ್ ನಂತರದ ವಿದ್ಯಾರ್ಥಿ ವೇತನವನ್ನು ಸದರಿ ಕೋರ್ಸುಗಳಿಗೆ ಸರ್ಕಾರಿ ಸೀಟಿಗೆ ನಿಗಧಿಪಡಿಸಿದ ಶುಲ್ಕವನ್ನು ಮಂಜೂರು ಮಾಡಲಾಗುತ್ತದೆ ಹಾಗೂ ಪರಿಶಿಷ್ಟ

ಜಾತಿ/ಪರಿಶಿಷ್ಟ ವರ್ಗದ ವಿದ್ಯಾರ್ಥಿಗಳ ಕುಟುಂಬದ ವಾರ್ಷಿಕ ಆದಾಯ ರೂ 100 ಲಕ್ಷ ಮೀರಿದಲ್ಲಿ ವೈದ್ಯಕೀಯ ಶಿಕ್ಷಣ ಇಲಾಖೆ ಮತ್ತು ತಾಂತ್ರಿಕ ಶಿಕ್ಷಣ ಇಲಾಖೆಗಳು ಶುಲ್ಕವನ್ನು ಭರಿಸುತ್ತವೆ

ಆ) ಉದ್ಭವಿಸುವುದಿಲ್ಲ

ಇ) ದೊರೆತಿದೆ

**626 (627) ಶ್ರೀ ಧ್ರುವನಾರಾಯಣ, ಆರ್ (ಸಂತೇಮರಳ್ಳಿ) – ಮಾನ್ಯ ಸಮಾಜ ಕಲ್ಯಾಣ ಸಚಿವರು ದಯೆಯಿಟ್ಟು ಈ ಕೆಳಕಂಡ ಪ್ರಶ್ನೆಗಳಿಗೆ ಉತ್ತರಿಸುವರೆ –**

ಅ) ರಾಜ್ಯದಲ್ಲಿ ಸಮಾಜ ಕಲ್ಯಾಣ ಇಲಾಖಾವತಿಯಿಂದ ನಡೆಸಲಾಗುತ್ತಿರುವ ಪೋಸ್ಟ್ ಮೆಟ್ರಿಕ್ ನಂತರದ ವಿದ್ಯಾರ್ಥಿನಿಲಯಗಳ ಸಂಖ್ಯೆ ಎಷ್ಟು ,

ಆ) ಇವುಗಳಲ್ಲಿ ಸ್ವಂತ ಕಟ್ಟಡಗಳನ್ನು ಹೊಂದಿರುವ ವಿದ್ಯಾರ್ಥಿನಿಲಯಗಳೆಷ್ಟು,

ಇ) ಬಾಡಿಗೆ ಕಟ್ಟಡಗಳಲ್ಲಿ ಕಾರ್ಯನಿರ್ವಹಿಸುತ್ತಿರುವ ವಿದ್ಯಾರ್ಥಿನಿಲಯಗಳೆಷ್ಟು,

ಈ) ಬಾಡಿಗೆ ಕಟ್ಟಡಗಳಲ್ಲಿ ಕಾರ್ಯನಿರ್ವಹಿಸುತ್ತಿರುವ ವಸತಿ ನಿಲಯಗಳಿಗೆ ಮಾಹೆಯಾನ ಒಟ್ಟು ಎಷ್ಟು ಬಾಡಿಗೆಯನ್ನು ಪಾವತಿಸಲಾಗುತ್ತಿದೆ

ಉ) 2007–08 ನೇ ಸಾಲಿನಲ್ಲಿ ಎಷ್ಟು ವಿದ್ಯಾರ್ಥಿನಿಲಯಗಳಿಗೆ ಸ್ವಂತ ಕಟ್ಟಡ ನಿರ್ಮಿಸಲು ಉದ್ದೇಶಿಸಲಾಗಿದೆ ?

**ಶ್ರೀ ಬಾಲಚಂದ್ರ ಲ ಜಾರಕಿಹೊಳಿ (ಸಮಾಜ ಕಲ್ಯಾಣ ಸಚಿವರು) –**

ಅ) ರಾಜ್ಯದಲ್ಲಿ ಸಮಾಜ ಕಲ್ಯಾಣ ಇಲಾಖೆವತಿಯಿಂದ ಪರಿಶಿಷ್ಟ ಜಾತಿಯ ವಿದ್ಯಾರ್ಥಿಗಳಿಗಾಗಿ 291 ಮೆಟ್ರಿಕ್ ನಂತರದ ವಿದ್ಯಾರ್ಥಿ ನಿಲಯಗಳನ್ನು ನಡೆಸಲಾಗುತ್ತಿದೆ

ಆ) ಇವುಗಳಲ್ಲಿ 157 ವಿದ್ಯಾರ್ಥಿ ನಿಲಯಗಳು ಸ್ವಂತ ಕಟ್ಟಡಗಳನ್ನು ಹೊಂದಿರುತವೆ

ಇ) ಬಾಡಿಗೆ ಕಟ್ಟಡಗಳಲ್ಲಿ 134 ಮೆಟ್ರಿಕ್ ನಂತರದ ವಿದ್ಯಾರ್ಥಿನಿಲಯಗಳು ಕಾರ್ಯನಿರ್ವಹಿಸುತ್ತಿವೆ

ಈ) ಬಾಡಿಗೆ ಕಟ್ಟಡಗಳಲ್ಲಿ ಕಾರ್ಯನಿರ್ವಹಿಸುತ್ತಿರುವ ವಸತಿನಿಲಯಗಳಿಗೆ ಮಾಹೆಯಾನ ಲೋಕೋಪಯೋಗಿ ಇಲಾಖೆಯು ನಿಗದಿಪಡಿಸಿದ ದರದನ್ವಯ ಒಟ್ಟು ರೂ 6,90,636 ಗಳನ್ನು ಪಾವತಿಸಲಾಗುತ್ತಿದೆ

ಉ) 2007–08ನೇ ಸಾಲಿನಲ್ಲಿ 10 ಮೆಟ್ರಿಕ್ ನಂತರದ ವಿದ್ಯಾರ್ಥಿನಿಲಯಗಳ ಕಟ್ಟಡಗಳನ್ನು ನಿರ್ಮಿಸಲು ಗುರಿಹೊಂದಿದ್ದು ನಿವೇಶನ ಹಾಗೂ ಅನುದಾನದ ಲಭ್ಯತೆಯನ್ನು ಅನುಸರಿಸಿ ಹೆಚ್ಚುವರಿ ಮೆಟ್ರಿಕ್ ನಂತರದ ವಿದ್ಯಾರ್ಥಿನಿಲಯಗಳ ಕಟ್ಟಡಗಳನ್ನು ನಿರ್ಮಿಸಲು ಕ್ರಮ ವಹಿಸಲಾಗುವುದು